# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,
ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 04.09.2021 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

**ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ.ಸುಬ್ರಮಣ್ಯ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಜಿ.ನಾಗಭೂಷಣ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀ.ಡಿ.ಎಂ.ರಮೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀ.ಅಮರನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
5. ಶ್ರೀ.ನವೀನ್ ಪ್ರಸಾದ್ ವಿ. ಪಿ.ಎಸ್.ಐ. ಬ್ಯಾಡರಹಳ್ಳಿ.
6. ಶ್ರೀ.ಆನಂದ್, ಸಹಾಯಕ ಕಾರ್ಯ ಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
7. ಶ್ರೀ.ಸಿದ್ದರಾಜ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
8. ಶ್ರೀ.ಗವಿಸಿದ್ದಯ್ಯ, ಸಹಾಯಕ ಅಭಿಯಂತರರು, ವಿದ್ಯುತ್.
9. ಶ್ರೀ.ಎಸ್.ಆರ್.ಶಶಿಧರ್, ಕಿರಿಯ ಅಭಿಯಂತರರು ಬೆಸ್ಕಾಂ, ಅಂದ್ರಹಳ್ಳಿ.
10. ಶ್ರೀ ವಿಜಯ್.ಸಿ. ಕಿರಿಯ ಅಭಿಯಂತರರು ಬೆಸ್ಕಾಂ, ದೊಡ್ಡಬಿದರಕಲ್ಲು.
11. ಶ್ರೀ.ಮುತ್ತೇಗೌಡ, ಕಿರಿಯ ಆರೋಗ್ಯ ಪರಿವೀಕ್ಷಕರು.
12. ಶ್ರೀ.ಬಾಲಕೃಷ್ಣ. ಎ. ಹೆಡ್ ಕಾನ್ಸ್ಟೇಬಲ್, ಬ್ಯಾಡರಹಳ್ಳಿ ಪೋಲೀಸ್ ಠಾಣೆ.

**ವಾರ್ಡ್ ಸಮಿತಿ ಸದಸ್ಯರುಗಳು.**

1. ಶ್ರೀ.ಸತೀಶ್. ಜಿ.ಹೊಸಹಳ್ಳಿ. ಸದಸ್ಯರು.
2. ಶ್ರೀ.ಕೂರ್ಲಪ್ಪ. ತಿಗಳರಪಾಳ್ಯ. ಸದಸ್ಯರು.
3. ಶ್ರೀ.ಮಾಲಾತೇಶ್. ದೊಡ್ಡಬಿದರಕಲ್ಲು. ಸದಸ್ಯರು.
4. ಶ್ರೀ.ಮಂಜುನಾಥ್. ಚನ್ನನಾಯಕನಪಾಳ್ಯ. ಸದಸ್ಯರು.
5. ಶ್ರೀ.ಮುನಿನಾರಾಯಣಪ್ಪ. ಇಂದಿರಾನಗರ. ಸದಸ್ಯರು.
6. ಶ್ರೀ.ನಟರಾಜ್. ತಿಳಗರಪಾಳ್ಯ. ಸದಸ್ಯರು.
7. ಶ್ರೀಮತಿ.ಮಂಗಳಮ್ಮ. ಮಾರಣ್ಣ ಬಡಾವಣೆ. ಸದಸ್ಯರು.
8. ಶ್ರೀಮತಿ.ಸುಮಿತ್ರಮ್ಮ. ಅಂದ್ರಹಳ್ಳಿ. ಸದಸ್ಯರು.

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.**

1. ಶ್ರೀ.ರಮೇಶ್. ಪಶು ವೈದ್ಯರು.
2. ಶ್ರೀ.ರಂಗಸ್ವಾಮಿ. ಅರಣ್ಯ ಇಲಾಖೆ.
3. ಶ್ರೀ.ಹೆಚ್.ಡಿ.ವೆಂಕಟೇಶ್. ತೋಟಗಾರಿಕೆ ಪರಿವೀಕ್ಷಕರು.
4. ಶ್ರೀಮತಿ ಮೇಘನಾ.ಬಿ.ಕೆ. ಸಹಾಯಕ ಅಭಿಯಂತರರು, ಕೆರೆಗಳ ವಿಭಾಗ, ರಾ.ರಾ.ನಗರ.ವಲಯ.
5. ಶ್ರೀ ಬಿ ರಮೇಶ್. ಸಹಾಯಕ ಅಭಿಯಂತರರು.ಯೋಜನೆ.
6. ಶ್ರೀ.ಆರಕ್ಷಕ ನಿರೀಕ್ಷಕರು. ಪೀಣ್ಯಾ ಪೋಲೀಸ್ ಠಾಣೆ.
7. ಶ್ರೀಮತಿ ಲಕ್ಷ್ಮಿ ಕೆ ಆರ್. SWM Plant ಅಧಿಕಾರಿಗಳು.

ವಾರ್ಡ್ ಸಮಿತಿಯ ಪ್ರಾರಂಭಿಕ ಸಭೆಯ ಉದ್ದೇಶವನ್ನು ತಿಳಿಸಿ. ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) **ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.**

- ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 46890 ಕೋವಿಡ್ ಲಸಿಕೆಗಳನ್ನು ವಿತರಿಸಲಾಗಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ತುಂಬಾ ಕಡಿಮೆಯಾಗಿದ್ದು, ಮಾರ್ಷಲ್‌ಗಳು ಹಗಲು/ರಾತ್ರಿ ಪಾಳಯದಲ್ಲಿ ಮಾಸ್ಕ್ ಧರಿಸದೇ ಇರುವ ಸಾರ್ವಜನಿಕರಿಗೆ ಧಂಡ ವಿಧಿಸುವ ಕಾರ್ಯ ನಿರ್ವಹಿಸುತ್ತಿರುತ್ತಾರೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಮಾತನಾಡುತ್ತಾ, ಕೋವಿಡ್ ಸೋಂಕಿನಿಂದ ಮೃತಪಟ್ಟ ಬಿ.ಪಿ.ಎಲ್ ಕಾರ್ಡುದಾರರ ಕುಟುಂಬಕ್ಕೆ 1 ಲಕ್ಷ ರೂಪಾಯಿಗಳ ಪರಿಹಾರ ಸರ್ಕಾರದಿಂದ ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಲಸಿಕೆಗಳನ್ನು ವಿತರಿಸುವ ಮಾಹಿತಿಯನ್ನು ಒಂದು ದಿನ ಮುಂಚಿತವಾಗಿ ತಿಳಿಸಬೇಕೆಂದು ಸದಸ್ಯರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಶಾಲಾ/ಕಾಲೇಜುಗಳಲ್ಲಿ ಕೇರಳದಿಂದ ವಿದ್ಯಾರ್ಥಿಗಳು ಬರುತ್ತಿರುವುದರಿಂದ, ಕಾಲೇಜುಗಳಲ್ಲಿ ಪರಿಶೀಲಿಸಿ ಹೊರರಾಜ್ಯದಿಂದ ಬಂದ ವಿದ್ಯಾರ್ಥಿಗಳಿಗೆ ಕೋವಿಡ್ ಪರೀಕ್ಷೆ ನಡೆಸಬೇಕೆಂದು ಸದಸ್ಯರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಮಾತನಾಡುತ್ತಾ, ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ನೀಡಲು ಅರ್ಜಿ ನೀಡಲಾಗಿದ್ದು, ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ವಿನಂತಿಸಿದರು.

2) **ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ತಿಗಳರಪಾಳ್ಯದ ಸ್ಮಶಾನದಲ್ಲಿರುವ ಘನ ತ್ಯಾಜ್ಯ ಸಂಗ್ರಹಣಾ ಘಟಕಕ್ಕೆ ನೀರು, ವಿದ್ಯುತ್ ಹಾಗು ಉತ್ತಮ ರಸ್ತೆ ಸಂಪರ್ಕ ಕಲ್ಪಿಸಿಕೊಡಲು ಸದರಿ ಜಾಗದ ಸರ್ವೆ ಮಾಡಲು ಎ.ಡಿ.ಎಲ್.ಆರ್ ಗೆ ಪತ್ರ ಬರೆಯಲು ಸದಸ್ಯರು ಕಳೆದ ಸಭೆಯಲ್ಲಿ ಸೂಚಿಸಿದ್ದ ಮೇರೆಗೆ ಪತ್ರ ಬರೆಯಲಾಗಿದೆ ಎಂದು ವಾರ್ಡ್ ಸಹಾಯಕ ಅಭಿಯಂತರರು/ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಅಗೆದ ಎಲ್ಲಾ ರಸ್ತೆಗಳನ್ನು ಸರಿಪಡಿಸಲು ಟೆಂಡರ್ ಪ್ರಕಟಿಸಲಾಗಿದೆ ಎಂದು ವಾರ್ಡ್ ಸಹಾಯಕ ಅಭಿಯಂತರರು/ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಒಂಟಿಮನೆಗಳಿಗೆ ಸಂಬಂಧಿಸಿದಂತೆ ಶ್ರೀ ಕುರ್ಲಪ್ಪ ಮತ್ತು ಇತರ ಸದಸ್ಯರು ನೋಡಲ್ ಅಧಿಕಾರಿಗಳ ಬಳಿ ಪ್ರಸ್ಥಾವಿಸಿದರು. ನಂತರ ಸಹಾಯಕ ಅಭಿಯಂತರರು/ಸದಸ್ಯ ಕಾರ್ಯದಶಿಗಳು ಮದ್ಯಪ್ರವೇಶಿಸಿ ಲೋಕಾಯುಕ್ತ ಕೋರ್ಟ್‌ನಲ್ಲಿ ಪ್ರಕರಣ ಬಾಕಿ ಇರುವುದರಿಂದ ಮಾನ್ಯ ವಿಷೇಶ ಆಯುಕ್ತರು ಸದರಿ ಒಂಟಿಮನೆಗಳಿಗೆ ಸಂಬಂಧಿಸಿದಂತೆ ಯಾವುದೇ ಬಿಲ್ ಪಾವತಿ ಮಾಡದಂತೆ ಸೂಚಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು. ಆದರೆ ಸಾರ್ವಜನಿಕರ ಹಾಗೂ ಬಡವರ ಒಳಿತಿಗಾಗಿ, ಸದಸ್ಯರುಗಳು ಈ ವಿಷಯವಾಗಿ ಮಾನ್ಯ ಜಂಟಿ ಆಯುಕ್ತರವರ ಬಳಿ ಚರ್ಚಿಸಿದ್ದು, ಬಾಕಿ ಇರುವ ಎಲ್ಲಾ ಕಡತಗಳನ್ನು ಮಾನ್ಯ ಜಂಟಿ ಆಯುಕ್ತರ ಕಛೇರಿಗೆ ರವಾನಿಸುವಂತೆ ಸರ್ವ ಸದಸ್ಯರು ಒಮ್ಮತದಿಂದ ಸೂಚಿಸಿದರು.

3) **ವಾರ್ಡ್ ವ್ಯಾಪ್ತಿಯಲ್ಲಿನ ಮಳೆ ನೀರುಗಾಲುವೆ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ರಾಜಕಾಲುವೆ ಕಾಮಗಾರಿ ಕಾರ್ಯವನ್ನು ಪ್ರಾರಂಭಿಸಿದ್ದು, ಒತ್ತುವರಿಯಾಗಿರುವ ಕಟ್ಟಡಗಳನ್ನು ತೆರವುಗೊಳಿಸುವುದಾಗಿ ಸಭೆಯಲ್ಲಿ ತಿಳಿಸಿದರು.

4) **ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ವಿದ್ಯುತ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ಕಾಮಗಾರಿಯನ್ನು ಡಿಸೆಂಬರ್ ಒಳಗಾಗಿ ಪೂರ್ಣಗೊಳಿಸಲಾಗುವುದೆಂದು ಸಹಾಯಕ ಅಭಿಯಂತರರು (ವಿದ್ಯುತ್)ರವರು ಸಭೆಯಲ್ಲಿ ತಿಳಿಸಿದರು.

೫) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿನ ಜಿ.ಎಮ್.ಕಾರ್ಟೆಜ್ ಹತ್ತಿರ ಒಳಚರಂಡಿ ಕಟ್ಟಿಕೊಂಡು ಸಾರ್ವಜನಿಕರಿಗೆ ತೊಂದರೆ ಆಗುತ್ತಿದ್ದು, ಸದರಿ ಸಮಸ್ಯೆಯನ್ನು ಈ ಕೂಡಲೇ ಪರಿಹರಿಸಬೇಕೆಂದು ಸದಸ್ಯರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಮತ್ತು ಎಲ್&ಟಿ ಅಭಿಯಂತರರುಗಳಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ದೊಡ್ಡಬಿದರಕಲ್ಲು ಸರ್ಕಲ್‌ನಿಂದ ಗುರುಶ್ರೀ ಸ್ಕೂಲ್ ವರೆಗಿನ ಒಳಚರಂಡಿ ಕಾಮಗಾರಿ ಅಪೂರ್ಣವಾಗಿದ್ದು, ದಿನಾಂಕ:10/09/2021ರ ಒಳಗಾಗಿ ಕಾಮಗಾರಿ ಪೂರ್ಣಗೊಳಿಸಲು ಸದಸ್ಯರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಮತ್ತು ಎಲ್&ಟಿ ಅಭಿಯಂತರರುಗಳಿಗೆ ಸೂಚಿಸಿದರು.
- ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಅಂದ್ರಹಳ್ಳಿ ಮುಖ್ಯರಸ್ತೆಯಲ್ಲಿ ಕಾವೇರಿ ಪೈಪ್‌ಲೈನ್ ಕಾಮಗಾರಿ ಪ್ರಗತಿಯಲ್ಲಿದ್ದು, ಕಾಮಗಾರಿ ಪೂರ್ಣಗೊಂಡ ಸ್ಥಳಗಳಲ್ಲಿ ವೆಟ್‌ಮಿಕ್ಸ್ ಹಾಕಿ ವಾಹನಗಳ ಓಡಾಟಕ್ಕೆ ಅನುಕೂಲವಾಗುವಂತೆ ರಸ್ತೆಗಳನ್ನು ಸಮತಟ್ಟು ಮಾಡಲು ಸದಸ್ಯರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರುಗಳಿಗೆ ಸೂಚಿಸಿದರು.

6) ವಾರ್ಡ್ ವ್ಯಾಪ್ತಿಯಲ್ಲಿನ ಪೊಲೀಸ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ಪೋಲೀಸ್ ಇಲಾಖೆಯ ವತಿಯಿಂದ ಮಾತನಾಡಿ ಗಣೇಶ ಉತ್ಸವ ಆಚರಣೆಗೆ ಸಂಬಂಧಿಸಿದಂತೆ, ಇಲ್ಲಿಯವರೆಗೆ ಸಾರ್ವಜನಿಕವಾಗಿ ಸಭೆ ಸಮಾರಂಭಗಳನ್ನು ಆಚರಿಸಲು ಯಾವುದೇ ಅನುಮತಿ ಇರುವುದಿಲ್ಲ. ಮುಂದಿನ ಹಂತಗಳಲ್ಲಿ ಸರ್ಕಾರದ ಆದೇಶಕ್ಕನುಗುಣವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯಲ್ಲಿನ ಬೆಸ್ಕಾಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ವಾರ್ಡ್ ವ್ಯಾಪ್ತಿಯಲ್ಲಿ ಎನ್.ಸಿ.ಸಿ ಕಂಪನಿಯವರು ಬೂಗತ ಕೇಬಲ್ ಅಳವಡಿಸುವಾಗ ಸಾರ್ವಜನಿಕ ಒಳಚರಂಡಿ ಹಾಗೂ ನೀರಿನ ಸಂಪರ್ಕ ಪೈಪ್‌ಗಳನ್ನು ಒಡದು ಹಾಕಿರುವುದು ಕಂಡು ಬಂದಿದ್ದು, ಇವುಗಳ ದುರಸ್ಥಿ ಕಾರ್ಯವನ್ನು ಎನ್.ಸಿ.ಸಿ ರವರೇ ಪೂರ್ಣಗೊಳಿಸಲು ಸದಸ್ಯರು ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು.
- ಬೆಸ್ಕಾಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನೀರು ಸರಬರಾಜು ಕಾರ್ಯನಿರ್ವಹಿಸುವ ಬೋರ್‌ವೆಲ್‌ಗಳ ವಿದ್ಯುತ್ ಸಂಪರ್ಕಗಳನ್ನು ಕಡಿತಗೊಳಿಸಿರುತ್ತಾರೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ಯಾವುದೇ ಸಾರ್ವಜನಿಕ ಬೋರ್‌ವೆಲ್ ಸಂಪರ್ಕ ಕಡಿತಗೊಳಿಸದಂತೆ ಸರ್ವ ಸದಸ್ಯರು ಸಭೆಯಲ್ಲಿ ತಿಳಿಸಿದರು.

8) ವಾರ್ಡ್ ವ್ಯಾಪ್ತಿಯಲ್ಲಿನ ಬಿಎಂಟಿಸಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು

- ಬಿಎಂಟಿಸಿ ಇಲಾಖೆಗೆ ಸಂಬಂಧಿಸಿದಂತೆ, ಡಿಪೋ ಸಂಖ್ಯೆ : 22ರ ಅಧಿಕಾರಿಗಳು ಸಭೆಯಲ್ಲಿ ಮಾತನಾಡಿ ವಿದ್ಯಾರ್ಥಿಗಳು ಹಳೆಯ ಬಸ್‌ಪಾಸ್‌ಗಳನ್ನು ಬಳಸಿಕೊಂಡು ಬಸ್ಸಿನಲ್ಲಿ ಪ್ರಯಾಣಿಸಬಹುದು ಎಂದು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬೆಳಗ್ಗೆ ಮತ್ತು ಸಂಜೆಯ ಸಮಯದಲ್ಲಿ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ಸದಸ್ಯರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

**ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು.**

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

6/9

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.40, ದೊಡ್ಡಬಿದರಕಲ್ಲು

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.40, ದೊಡ್ಡಬಿದರಕಲ್ಲು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

**ಅಧಿಕಾರಿಗಳ ಮಾಹಿತಿಗಾಗಿ**

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ. ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಟಿ.ಡಬ್ಲ್ಯೂ.ಎಸ್.ಎಸ್.ಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
13. ವಲಯ ಅರಣ್ಯಧಿಕಾರಿಗಳು, ರಾ.ರಾ.ನಗರ ವಲಯ ರವರ ಮಾಹಿತ್ತಿಗಾಗಿ ಕಳುಹಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳು ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
15. ತೋಟಗಾರಿಕೆ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
16. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.40, ದೊಡ್ಡಬಿದರಕಲ್ಲು ರವರ ಮಾಹಿತಿಗಾಗಿ ಕಳುಹಿಸಿದೆ.
17. ಪೋಲೀಸ್ ಇನ್‌ಸ್ಪೆಕ್ಟರ್, ಪೀಣ್ಯ/ಬ್ಯಾಡರಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.